ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ವಿಕಲಚೇತನ ಶಾಲೆಗಳ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1396 (1656) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ವಿಕಲಚೇತನ ಶಾಲೆಗಳಿವೆ ;

(ಆ) ಇದರಲ್ಲಿ ಎಷ್ಟು ಶಾಲೆಗಳನ್ನು ಸರ್ಕಾರ ಹಾಗೂ ಎಷ್ಟು ಶಾಲೆಗಳನ್ನು ಸರ್ಕಾರೇತರ ಸಂಸ್ಥೆಗಳು ನಡೆಸುತ್ತಿವೆ ;

(ಇ) ರಾಜ್ಯದಲ್ಲಿರುವ ಸರ್ಕಾರ ಮತ್ತು ಸರ್ಕಾರೇತರ ಶೀರ್ಷಿಕೆಯಲ್ಲಿ ಇರುವ ಅಂಧ ಮಕ್ಕಳ ಶಾಲೆಗಳೆಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಶಾಲೆಗಳಿಗೆ ಬಿಡುಗಡೆ ಮಾಡಲಾದ ಸಹಾಯ ಧನವೆಷ್ಟು;

(ಉ) ಸದರಿ ವಿಕಲಚೇತನ ಶಾಲೆಗಳಿಗೆ ಕೊಡುವ ಅನುದಾನವು ಅತೀ ಕಡಿಮೆ ಇದ್ದು, ಸರ್ಕಾರೇತರ ಸಂಸ್ಥೆಗಳೇ ಹೆಚ್ಚಾಗಿ ನಡೆಸುತ್ತಿದ್ದು, ಈ ಸಂಸ್ಥೆಗಳ ಶಕ್ತಿ ಬಲಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?